# ಕರ್ನಾಟಕ ವಿಧಾನ ಪರಿಷತ್ತು

ಸಂಖ್ಯೆ:ಕವಿಪ:ಆ–1/162/ಸು/2020

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನಸೌಧ,
ಬೆಂಗಳೂರು–560 001, ದಿನಾಂಕ:11.06.2021

## ಸುತ್ತೋಲೆ

ಉಲ್ಲೇಖ: 1. ಕವಿಪ/ಆ–1/161/ಸು/2018 ದಿನಾಂಕ:27.04.2021
2. ಕವಿಪ/ಆ–1/161/ಸು2021 ದಿನಾಂಕ:10.05.2021 & 22.05.2021
3. ಕವಿಪ/ಆ–1/161/ಸು/2020, ದಿನಾಂಕ:04.06.2021

*****

ಕರ್ನಾಟಕ ರಾಜ್ಯದಲ್ಲಿ ಕೊರೋನ ವೈರಸ್ (ಕೋವಿಡ್–19) ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನಲೆಯಲ್ಲಿ ಮೇಲ್ಕಂಡ ಉಲ್ಲೇಖಿತ ಸುತ್ತೋಲೆ ಸಂಖ್ಯೆ 1 ಮತ್ತು 2ರನ್ವಯ ಕರ್ನಾಟಕ ವಿಧಾನ ಪರಿಷತ್ತಿನ ಅಧಿಕಾರಿ/ನೌಕರರುಗಳಿಗೆ ಹಾಜರಾತಿಯಿಂದ ವಿನಾಯಿತಿ ನೀಡಲಾಗಿತ್ತು.

ಉಲ್ಲೇಖಿತ ಸಂಖ್ಯೆ 3ರ ಪ್ರಕಾರ ಹೊರಡಿಸಿರುವ ಸುತ್ತೋಲೆಯಲ್ಲಿ ವಿಧಾನ ಪರಿಷತ್ತಿನ ಸಚಿವಾಲಯದ ಅಧೀನ ಕಾರ್ಯದರ್ಶಿ ಮೇಲ್ಪಟ್ಟ ಎಲ್ಲಾ ಅಧಿಕಾರಿಗಳು ಕರ್ತವ್ಯಕ್ಕೆ ಹಾಜರಾಗಬೇಕೆಂದು ಸೂಚಿಸಿ, ಅವರ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಪ್ 'ಬಿ', 'ಸಿ', ಮತ್ತು 'ಡಿ' ಗುಂಪಿನ ಅಧಿಕಾರಿ/ನೌಕರರನ್ನು ತಮ್ಮ ವ್ಯಾಪ್ತಿಗೊಳಪಡುವ ಶಾಖೆಯ ಕಾರ್ಯಗಳ ಅವಶ್ಯಕತೆಗನುಗುಣವಾಗಿ ಕರೆಸಿಕೊಳ್ಳುವ ತೀರ್ಮಾನ ತೆಗೆದುಕೊಳ್ಳಬಹುದಾಗಿರುತ್ತದೆ ಎಂದು ತಿಳಿಸಲಾಗಿತ್ತು. ಆದರೆ ಹಲವು ಅಧಿಕಾರಿಗಳು ಕರ್ತವ್ಯಕ್ಕೆ ಹಾಜರಾಗಿಲ್ಲದಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ.

ದಿನಾಂಕ:27.04.2021 ರಿಂದ 06.06.2021ರವರೆಗೆ ಕಛೇರಿ ಹಾಜರಾತಿಯಿಂದ ವಿನಾಯಿತಿ ನೀಡಲಾಗಿದ್ದ ಕಾರಣದಿಂದಾಗಿ ಸಚಿವಾಲಯದ ಕೆಲಸ–ಕಾರ್ಯಗಳು ಬಾಕಿ ಉಳಿದುಕೊಂಡಿದ್ದು ಅವುಗಳನ್ನು ಜರೂರಾಗಿ ನಿರ್ವಹಿಸುವಂತಹ ಅವಶ್ಯಕತೆ ಇರುತ್ತದೆ. ಆದುದರಿಂದ ದಿನಾಂಕ:14.06.2021ರಿಂದ ಸಚಿವಾಲಯದ ಅಧಿಕಾರಿ/ನೌಕರರುಗಳು (ದೃಷ್ಟಿಹೀನ ಹಾಗೂ ಇತರ ಅಂಗವೈಕಲ್ಯ ಹೊಂದಿರುವ ಅಧಿಕಾರಿ/ಸಿಬ್ಬಂದಿ ಮತ್ತು ಗರ್ಭಿಣಿ ಮಹಿಳಾ ಸಿಬ್ಬಂದಿಗಳನ್ನು ಹೊರತುಪಡಿಸಿ) ಕರ್ತವ್ಯಕ್ಕೆ ಹಾಜರಾಗಬೇಕೆಂದು ಸೂಚಿಸಲಾಗಿದೆ.

11/6/2021

(ಕೆ.ಆರ್. ಮಹಾಲಕ್ಷ್ಮಿ)
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಗೆ:

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರರುಗಳಿಗೆ (ಶಾಸಕರ ಭವನವೂ ಸೇರಿದಂತೆ)

ಪ್ರತಿಗಳು:–

1. ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿ, ಕವಿಪ.,
2. ಮಾನ್ಯ ಉಪ ಸಭಾಪತಿಯವರ ಆಪ್ತ ಕಾರ್ಯದರ್ಶಿ, ಕ.ವಿ.ಪ.,
3. ಮಾನ್ಯ ವಿರೋಧ ಪಕ್ಷದ ನಾಯಕರ ಆಪ್ತ ಕಾರ್ಯದರ್ಶಿ, ಕ.ವಿ.ಪ.,
4. ಮಾನ್ಯ ಸರ್ಕಾರಿ ಮುಖ್ಯ ಸಚೇತಕರ ಆಪ್ತ ಕಾರ್ಯದರ್ಶಿ, ಕ.ವ.ಪ.,
5. ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರ ಆಪ್ತ ಕಾರ್ಯದರ್ಶಿ, ಕ.ವಿ.ಪ.,
6. ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕ.ವಿ.ಪ.,
7. ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕ.ವಿ.ಪ.,
8. ಆಂತರಿಕ ಆರ್ಥಿಕ ಸಲಹೆಗಾರರು/ಆರ್ಥಿಕ ಅಧಿಕಾರಿಯವರಿಗೆ, ಕ.ವಿ.ಪ.,
9. ಗಣಕ ಕೇಂದ್ರ, ಕ.ವಿ.ಪ.,
10. ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಹಾಗೂ ಶಾಸಕರ ಭವನದ ಸೂಚನಾ ಫಲಕಗಳಿಗೆ
11. ಸಂಬಂಧಪಟ್ಟ ಕಡತಕ್ಕೆ/ರಕ್ಷಾ ಕಡತಕ್ಕೆ ಕ.ವಿ.ಪ.,